Flexible intramedullary reemers ಹಾಗೂ bipolar cautery ಮುಂತಾದ ಉಪಕರಣವಿಲ್ಲದೆ ರೋಗಿಗಳ ಉಪಚಾರಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?: ಈ ಯಂತ್ರಗಳನ್ನು ಪೂರೈಸಲು ಸರ್ಕಾರ ಕ್ರಮ ಕೈಗೊಳ್ಳುವುದೇ:

ಆ) ತೀರ್ಥಹಳ್ಳಿ ಜೆ.ಸಿ. ಆಸ್ಪತ್ರೆಯನ್ನು ನೂರು ಹಾಸಿಗೆಗೆ ಮೇಲ್ದರ್ಜೆಗೇರಿಸಿ ರಾಜ್ಯ ವಲಯದ ಆಸ್ಪತ್ರೆಯಾದ ಮೇಲೆ ಸ್ತ್ರೀರೋಗ ವೈದ್ಯ ಹುದ್ದೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಸರ್ಕಾರ ತಕ್ಷಣ ಹುದ್ದೆ ಮಂಜೂರು ಮಾಡಲು ಕ್ರಮ ಕೈಗೊಳ್ಳುವುದೆ?

ಶ್ರೀ ಆರ್. ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಹೌದು. ಮೂಳೆ ಕೀಲು ವಿಭಾಗದಲ್ಲಿ ಸಿ.ಆರ್ಮ್, ರೀಮರ್ಸ್ ಹಾಗೂ ಕಾಟರಿ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆ. ಇದನ್ನು ಪರೀಕ್ಷಿಸಿ, ಈ ವರ್ಷದ ಕಾರ್ಯಸೂಚಿಯಲ್ಲಿ ಸೇರಿಸಿ 2006–07 ರಲ್ಲಿ ಸರಬರಾಜು ಮಾಡಲು ಕ್ರಮ ಕೈಗೊಳ್ಳಲಾಗುವುದು.

ಆ) 9 ವೈದ್ಯರ ಹುದ್ದೆಗಳು ಮಂಜೂರಾಗಿವೆ. ಒಂದು ಫಿಜಿಷಿಯನ್ ಹುದ್ದೆ ಖಾಲಿ ಇದೆ. ಸ್ತ್ರೀರೋಗ ತಜ್ಞರಾದ ಡಾ: ಎಂ.ಪಿ. ಮನೋಹರ್, ಎಂ.ಡಿ. ಸ್ತ್ರೀರೋಗ ತಜ್ಞರು 2½ ವರ್ಷಗಳಿಂದ ಕಾರ್ಯನಿರ್ವಹಿಸುತ್ತಿದ್ದಾರೆ.

551 (886) ಶ್ರೀ ಧ್ರುವನಾರಾಯಣ ಆರ್. (ಸಂತೇಮರಳ್ಳಿ) : ಮಾನ್ಯ ಕಾರ್ಮಿಕ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಸಂತೇಮರಳ್ಳಿ ವಿಧಾನಸಭಾ ಕ್ಷೇತ್ರ ಕೇಂದ್ರ ಸ್ಥಾನದಲ್ಲಿ ಸರ್ಕಾರದಿಂದ ಕೈಗಾರಿಕಾ ತರಬೇತಿ ಕೇಂದ್ರವನ್ನು ಮಂಜೂರು ಮಾಡಿ ಈ ಭಾಗದ ನಿರುದ್ಯೋಗಿ ಯುವಕ : ಯುವತಿಯರಿಗೆ ಅನುಕೂಲ ಮಾಡುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ:

ಆ) ಹಾಗಿದ್ದಲ್ಲಿ, ಸರ್ಕಾರದ ಕಟ್ಟಡ ಸಹ ಲಭ್ಯವಿರುವುದರಿಂದ ಈ ಕೈಗಾರಿಕಾ ತರಬೇತಿ ಕೇಂದ್ರವನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳುವುದೇ?

ಶ್ರೀ ಇಕ್ಬಾಲ್ ಅನ್ಸಾರಿ (ಕಾರ್ಮಿಕ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು) :

ಅ) ಇದುವರೆಗೆ ಯಾವುದೇ ಪ್ರಸ್ತಾವನೆ ಬಂದಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

552 (887) ಶ್ರೀ ಧ್ರುವನಾರಾಯಣ ಆರ್. (ಸಂತೇಮರಳ್ಳಿ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ನಂಜನಗೂಡು ಪಟ್ಟಣದಲ್ಲಿರುವ ಪರಿಶಿಷ್ಟ ಜಾತಿ ಸರ್ಕಾರಿ ವಸತಿ ಬಾಲಕಿಯರ ಪ್ರೌಢ ಶಾಲೆಗೆ ನೀಡುತ್ತಿರುವ ವಿದ್ಯಾರ್ಥಿ ವೇತನ ಭತ್ಯೆ ರೂ. 250/– ಬೇರೆ ವಿದ್ಯಾರ್ಥಿ ನಿಲಯಕ್ಕೆ ಮಾಸಿಕ 500 ರೂಗಳನ್ನು ನೀಡಲಾಗುತ್ತಿದ್ದು ಈ ವಸತಿ ಶಾಲೆಗೆ ಈ ತಾರತಮ್ಯ ಮಾಡುತ್ತಿರುವುದು ಏಕೆ: